**ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 954/2024**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ 2**

**ದಿನಾಂಕಃ** 17.08.2026 **ಸಿಡಬ್ಲ್ಯೂ 2**

| | |
|---|---|
| ಹೆಸರು | ತಿಮ್ಮೇಶ |
| ತಂದೆ ಹೆಸರು | ದ್ಯಾಮಪ್ಪ |
| ವಯಸ್ಸು | 34 ವರ್ಷ |
| ಉದ್ಯೋಗ | ವ್ಯವಸಾಯ |
| ವಾಸ ಸ್ಥಳ | ಹಂಪಸಾಗರ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ.1 ಮತ್ತು 3 ರವರ ಪರಿಚಯ ಇರುತ್ತದೆ. ನಾನು ಹರಿಹರ ಪೋಲೀಸ್ ಠಾಣೆಗೆ ಬಂದಿರುತ್ತೇನೆ. ಉಳಿದಿದ್ದು ನನಗೇನು ಗೊತ್ತಿರುವುದಿಲ್ಲ. ಸಾಕ್ಷಿಯು ನಿಪಿ.2 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ, ಅದನು ನಿಪಿ.2 ಬಿ ಎಂದು ಗುರುತಿಸಲಾಯಿತು. ಸಾಕ್ಷಿಯು 2 ಪೋಟೋಗಳು ನಿಪಿ.4, 5 ನ್ನು ನೋಡಿ ಗುರುತಿಸಿದ್ದು ಪೋಟೋಗಳನ್ನು ಸಾಲಕಟ್ಟೆಯಲ್ಲಿ ತೆಗೆದಿರುತ್ತಾರೆ. ಪೋಟೋಗಳನ್ನು ಯಾರು ಏಕೆ ತೆಗೆದಿರುತ್ತಾರೆಂದು ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುವನ್ನು ಜಪ್ತು ಪಡಿಸಿಕೊಂಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ30.08.2023 ರಂದು ಗ್ರಾಮಾಂತರ ಪೋಲೀಸರು ನನ್ನನ್ನು ಮತ್ತು ನಾಗರಾಜರವರನ್ನು ಚಾಸಾ.1 ವನಜಾಕ್ಷಮ್ಮರವರ ಮನೆಯ ಹತ್ತಿರ ನೋಟೀಸ್ ನೀಡಿ ಪಂಚನಾಮೆಗೆ ಕರೆಸಿರುತ್ತಾರೆ ಎಂದರೆ ಸರಿಯಲ್ಲ. ಆ ಸ್ಥಳದಲ್ಲಿ ವನಜಾಕ್ಷಮ್ಮರವರು ಇದೇ ಸ್ಥಳದಲ್ಲಿ ನನ್ನ ಗಂಡ ಅತ್ತೆ ಕೈಯಿಂದ ಹೊಡೆದು ಕಾಲಿನಿಂದ ಒದ್ದು ರಾಡಿನಿಂದ ಹೊಡೆದಿರುತ್ತಾರೆಂದು ಒಂದು ರಾಡನ್ನು ತೋರಿಸಿದ್ದು ಪೋಲೀಸರು ಅದನ್ನು ಬೆಳ್ಗೆ 10.15 ರಿಂದ 11 ಗಂಟೆವರೆಗೆ ಪಂಚನಾಮೆ ಮಾಡಿ ಜಪ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಪಂಚನಾಮೆ ಮಾಡಿದ ವಸ್ತುವನ್ನು ಜಪ್ತು ಪಡಿಸಿಕೊಂಡಿದ್ದರೂ ಸಹ ಆರೋಪಿತರಿಗೆ ಅನುಕೂಲವಾಗಲಿ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿತರ ಪರ ವಕೀಲರಿಂದಃ ಇರುವುದಿಲ್ಲ.

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/-

ಪ್ರಧಾನ ಸಿವಿಲ್ ನ್ಯಾಯಾಧೀಶರು

ಮತ್ತು ಜೆಎಂಎಫ್‌ಸಿ, ಹರಿಹರ.